# ಕರ್ನಾಟಕ ವಿಧಾನಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

**ಚುಕ್ಕೆ ಗುರುತಿನ ಪ್ರಶ್ನೆ**

ದಿನಾಂಕ : 05-03-2021 ಪ್ರಶ್ನೆ ಸಂಖ್ಯೆ : 115 (761)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 05-03-2021

ಉತ್ತರಿಸುವ ಸಚಿವರು : ಮೂಲಸೌಲಭ್ಯ ಅಭಿವೃದ್ಧಿ ಹಾಗೂ ಹಜ್ ಮತ್ತು ವಕ್ಫ್ ಸಚಿವರು

ವಿಷಯ : ಧಾರವಾಡದಿಂದ ಬೆಳಗಾವಿಗೆ ಹೊಸ ರೈಲು ಮಾರ್ಗದ ರಚನೆ ಬಗ್ಗೆ

(ಅ) ಧಾರವಾಡದಿಂದ ಬೆಳಗಾವಿಗೆ ಪ್ರಯಾಣ ಮಾಡಲು ಪ್ರಸ್ತುತ ಇರುವ ರೈಲು ಮಾರ್ಗದ ಬದಲಾಗಿ ನೇರವಾದ ರೈಲು ಮಾರ್ಗವನ್ನು ನಿರ್ಮಾಣ ಮಾಡಲು ಕೇಂದ್ರ ಸರ್ಕಾರವು ನಿರ್ಧರಿಸಿರುವುದು ನಿಜವೇ ; ಹಾಗಿದ್ದಲ್ಲಿ, ಹೊಸ ಮಾರ್ಗದಿಂದ ಪ್ರಯಾಣಕ್ಕೆ ತಗಲುವ ಸಮಯ ಎಷ್ಟು ;

(ಆ) ಈ ಹೊಸ ರೈಲು ಮಾರ್ಗ ನಿರ್ಮಾಣಕ್ಕೆ ತಗಲುವ ವೆಚ್ಚವೆಷ್ಟು ;

(ಇ) ಸದರಿ ರೈಲು ಮಾರ್ಗಕ್ಕೆ ಸಂಬಂಧಿಸಿದಂತೆ ಎಷ್ಟು ಎಕರೆ ಭೂಮಿಯನ್ನು ಸ್ವಾಧೀನಪಡಿಸಿಕೊಳ್ಳಬೇಕಾಗುತ್ತದೆ ;

(ಈ) ಹೊಸ ಮಾರ್ಗ ನಿರ್ಮಾಣಕ್ಕೆ ತಗಲುವ ವೆಚ್ಚದಲ್ಲಿ ರಾಜ್ಯ ಸರ್ಕಾರ ಭರಿಸಬೇಕಾದ ಹಣಕಾಸಿನ ಪ್ರಮಾಣವೆಷ್ಟು ; ಇದಕ್ಕಾಗಿ ಸರ್ಕಾರ ಎಷ್ಟು ಹಣವನ್ನು ಕಾಯ್ದಿರಿಸಿದೆ ;

(ಉ) ಈ ಹೊಸ ರೈಲು ಮಾರ್ಗವನ್ನು ಯಾವ ಕಾಲಮಿತಿಯಲ್ಲಿ ಪೂರ್ಣಗೊಳಿಸಲಾಗುವುದು ? (ವಿವರ ನೀಡುವುದು)